# All India Radio: Bangalore
# Regional Bulletin In Kannada
# 14.12.2025 / 6.40 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ
## 14.12.2025 / 6.40 p.m.
**<><><><>**

ಮುಖ್ಯಾಂಶಗಳು :

1. ಬೇಡ್ತಿ-ವರದಾ ನದಿ ಜೋಡಣೆ ಯೋಜನೆಗೆ ವಿರೋಧ ಬೇಡ: ಸಂಸದ ಬಸವರಾಜ ಬೊಮ್ಮಾಯಿ ಮನವಿ
2. ಮೆಟ್ರೋ ಕಾಮಗಾರಿ ವಿಳಂಬ: ತ್ವರಿತ ಕ್ರಮಕ್ಕೆ ಅಧಿಕಾರಿಗಳಿಗೆ ಸಚಿವ ಕೃಷ್ಣ ಬೈರೇಗೌಡ ಸೂಚನೆ
3. ದೇಶದ ಮತದಾನದ ಹಕ್ಕು ಉಳಿಸಲು ಹೋರಾಟ; ರಾಜಕೀಯ ಉದ್ದೇಶವಿಲ್ಲ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್
4. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಪಾಲಿಕೆಗಳಲ್ಲಿ ನಾಮನಿರ್ದೇಶನದಿಂದ ಚುನಾವಣೆ ಮುಂದೂಡಿಕೆ ಆರೋಪ ನಿರಾಧಾರ - ನಗರಾಭಿವೃದ್ಧಿ ಇಲಾಖೆ ಸ್ಪಷ್ಟನೆ
5. ರಾಜ್ಯದಲ್ಲಿ ತೀವ್ರ ಶೀತ ಅಲೆ: ಬೀದರ್‌ನಲ್ಲಿ ೭.೪ ಡಿಗ್ರಿ ಸೆಲ್ಸಿಯಸ್ ಕನಿಷ್ಠ ತಾಪಮಾನ ದಾಖಲು

<><><><>

ಬರಪೀಡಿತ ಪ್ರದೇಶಗಳಿಗೆ ಅನುಕೂಲವಾಗುವ ಬೇಡ್ತಿ-ವರದಾ ನದಿ ಜೋಡಣೆ ಯೋಜನೆಗೆ ತಪ್ಪು ಕಲ್ಪನೆಯಿಂದ ವಿರೋಧ ಮಾಡುವುದು ಬೇಡ ಎಂದು ಮಾಜಿ ಮುಖ್ಯಮಂತ್ರಿ ಮತ್ತು ಸಂಸದ ಬಸವರಾಜ ಬೊಮ್ಮಾಯಿ ಮನವಿ ಮಾಡಿದ್ದಾರೆ. ಹಾವೇರಿಯಲ್ಲಿಂದು ಮಾಧ್ಯಮಗಳೊಂದಿಗೆ ಮಾತನಾಡಿರುವ ಅವರು, ಬೇಡ್ತಿ-ವರದಾ ನದಿ ಜೋಡಣೆ ಯೋಜನೆ ೩೦ ವರ್ಷಗಳಿಂದ ಇರುವ ರಾಷ್ಟ್ರೀಯ ನೀರು ಅಭಿವೃದ್ಧಿ ಪ್ರಾಧಿಕಾರದ ಯೋಜನೆಯಾಗಿದೆ. ನದಿಯ ಒಟ್ಟು ನೀರಿನ ಹರಿವಿನ ಕೇವಲ ಶೇಕಡಾ ೧೦ರಷ್ಟು ನೀರನ್ನು ಮಾತ್ರ ಬಳಸಲು ಪರಿಷ್ಕರಿಸಲಾಗಿದೆ. ಯೋಜನೆಯ ಸಾಧಕ-ಬಾಧಕಗಳು ಮತ್ತು ಪರಿಸರದ ಪರಿಣಾಮಗಳ ಕುರಿತು ಡಿಪಿಆರ್ ಸಿದ್ಧಪಡಿಸಿ, ಪರಿಣಿತರು ತೀರ್ಮಾನ ಮಾಡಲಿದ್ದಾರೆ. ಬರಪೀಡಿತ ಹಾವೇರಿ ಮತ್ತು ಸುತ್ತಮುತ್ತಲಿನ ಜಿಲ್ಲೆಗಳ ಕುಡಿಯುವ ನೀರಿನ ಸಮಸ್ಯೆಯನ್ನು ಇದು ನೀಗಿಸುವುದರಿಂದ ಎಲ್ಲರೂ ಸಹಕಾರ ನೀಡಬೇಕು ಎಂದು ಅವರು ಕೋರಿದರು. ಮತಗಳವು ಹೆಸರಿನಲ್ಲಿ ಕಾಂಗ್ರೆಸ್ ನಡೆಸುತ್ತಿರುವ ಪ್ರತಿಭಟನೆಯ ಕುರಿತು ಮಾತನಾಡಿದ ಅವರು, ಸುಳ್ಳನ್ನು ಸತ್ಯವಾಗಿ ಬಿಂಬಿಸುವ ಪ್ರಯತ್ನ ಇದಾಗಿದೆ ಎಂದು ಟೀಕಿಸಿದರು. ಬಳಿಕ ಸವಣೂರಿನಲ್ಲಿ ಶಿಕ್ಷಕರ ಮೇಲೆ ನಡೆದ ನೈತಿಕ ಪೊಲೀಸ್‌ಗಿರಿ ಪ್ರಕರಣವನ್ನು ಅವರು, ಖಂಡಿಸಿದರು.

<><><><>

ನಗರಾಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಇಂದು ನಾಗವಾರದಿಂದ ಬಾಗಲೂರು ಕ್ರಾಸ್ ನಡುವಿನ ನಮ್ಮ ಮೆಟ್ರೋ ಎರಡನೇ ಹಂತದ ಕಾಮಗಾರಿಗಳನ್ನು ಪರಿಶೀಲಿಸಿದರು. ಈ ವೇಳೆ ಕಾಮಗಾರಿಯಲ್ಲಿನ ವಿಳಂಬ, ಪಾದಚಾರಿ ಮಾರ್ಗಗಳಲ್ಲಿ ತ್ಯಾಜ್ಯ ಮತ್ತು ಅನಗತ್ಯ ರಸ್ತೆ ತಡೆಗಳಿಂದ ಸಾರ್ವಜನಿಕರಿಗೆ ಉಂಟಾಗುತ್ತಿರುವ ತೊಂದರೆಗಳ ಬಗ್ಗೆ ಸಚಿವರು ತೀವ್ರ ಅಸಮಾಧಾನ ವ್ಯಕ್ತಪಡಿಸಿ, ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಎರಡು ವರ್ಷಗಳಿಂದ ಮುಗಿಯದ ಮೆಟ್ರೋ ಕಂಬಗಳ ನಿರ್ಮಾಣ ಕುರಿತು ಅಧಿಕಾರಿಗಳ ಕಾರ್ಯವೈಖರಿ ಬಗ್ಗೆ ಸಚಿವರು ತೀವ್ರ ಆಕ್ಷೇಪ

ವ್ಯಕ್ತಪಡಿಸಿದರು. ಮೆಟ್ರೋ ಕಾಮಗಾರಿ ತ್ಯಾಜ್ಯಗಳಿಂದ ತುಂಬಿದ್ದ ಪಾದಚಾರಿ ಮಾರ್ಗ ಮತ್ತು ಸರ್ವೀಸ್ ರಸ್ತೆಗಳನ್ನು ಕೂಡಲೇ ತೆರವುಗೊಳಿಸಿ ಜನ ಸಂಚಾರಕ್ಕೆ ಅನುವು ಮಾಡಿಕೊಡುವಂತೆ ಆದೇಶಿಸಿದರು. ಟ್ರಾಫಿಕ್ ಸಮಸ್ಯೆ ಉಂಟುಮಾಡುವ ಅನಗತ್ಯ ರಸ್ತೆ ತಡೆಗಳನ್ನು ತಕ್ಷಣವೇ ತೆಗೆದುಹಾಕಿ ವಾಹನ ಸಂಚಾರ ಸುಗಮಗೊಳಿಸುವಂತೆ ಸೂಚನೆ ನೀಡಿದರು. ಮೆಟ್ರೋ ಕಾಮಗಾರಿಗಳನ್ನು ತ್ವರಿತವಾಗಿ ಮತ್ತು ಕಾಲಮಿತಿಯಲ್ಲಿ ಪೂರ್ಣಗೊಳಿಸುವಂತೆ ಸಚಿವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದರು.

<><><>

ದೇಶದ ೧೪೦ ಕೋಟಿ ಜನರ ಮತದಾನದ ಹಕ್ಕು ಉಳಿಸಲು  ಮತಕಳ್ಳತನದ ವಿರುದ್ಧ ಹೋರಾಟ ಮಾಡಲಾಗುತ್ತಿದೆ. ಇದರಲ್ಲಿ ಯಾವುದೇ ರಾಜಕೀಯ ಉದ್ದೇಶವಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮತ್ತು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ನೇತೃತ್ವದಲ್ಲಿ ರಾಮಲೀಲಾ ಮೈದಾನದಲ್ಲಿ ನಡೆಯುತ್ತಿರುವ 'ಮತಕಳ್ಳತನ ವಿರೋಧಿ ಪ್ರತಿಭಟನೆ'ಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ದೇಶದಲ್ಲಿ ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆಗಳನ್ನು ಖಚಿತಪಡಿಸಲು ಈ ಪ್ರತಿಭಟನೆ ಅಗತ್ಯವಾಗಿದೆ. ಮತಕಳ್ಳತನಕ್ಕೆ ಸಂಬಂಧಿಸಿದಂತೆ ದಾಖಲೆಗಳನ್ನು ನೀಡಿದರೂ ಚುನಾವಣಾ ಆಯೋಗದಿಂದ ಸರಿಯಾದ ಉತ್ತರ ಸಿಗುತ್ತಿಲ್ಲ. ಸಾಂವಿಧಾನಿಕ ಸಂಸ್ಥೆಗಳ ದುರ್ಬಳಕೆ ಬಗ್ಗೆ ಜನರಲ್ಲಿ ಅರಿವು ಮೂಡಿಸಲು ಬೀದಿಗಿಳಿದು ಹೋರಾಟ ಮಾಡಲಾಗುತ್ತಿದೆ ಎಂದು ಅವರು ತಿಳಿಸಿದರು. ಪ್ರತಿಭಟನೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕಾಂಗ್ರೆಸ್ ಶಾಸಕರು ಸೇರಿದಂತೆ ರಾಜ್ಯದಿಂದ ಸುಮಾರು ೪ ಸಾವಿರ ಕಾರ್ಯಕರ್ತರು ಭಾಗವಹಿಸಿದ್ದಾರೆ.

<><><>

ಮಂಡ್ಯ ಜಿಲ್ಲೆಯ ಮಳವಳ್ಳಿ ಪಟ್ಟಣದಲ್ಲಿ ಸುತ್ತೂರಿನ ಆದಿಜಗದ್ಗುರು ಶ್ರೀ ಶಿವರಾತ್ರಿ ಶಿವಯೋಗಿಗಳರವರ ೧೦೬೬ನೇ ಜಯಂತಿ ಮಹೋತ್ಸವ ನಾಳೆಯಿಂದ ಅರಂಭವಾಗಲಿದೆ. ಡಿಸೆಂಬರ್ ೧೬ ರಂದು  ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಕಾರ್ಯಕ್ರಮಕ್ಕೆ ಆಗಮಿಸುವ ಹಿನ್ನೆಲೆಯಲ್ಲಿ ಮಾರೆಹಳ್ಳಿ ಬಳಿ ಹೆಲಿಪ್ಯಾಡ್ ನಿರ್ಮಿಸಲಾಗಿದ್ದು, ಇಂದು ದೆಹಲಿ ಭದ್ರತಾ ಪಡೆ ಅಧಿಕಾರಿಗಳ ತಂಡ ಹಾಗೂ ಜಿಲ್ಲಾಧಿಕಾರಿ  ಡಾ.ಕುಮಾರ ನೇತೃತ್ವದಲ್ಲಿ ಅಗಮಿಸಿ ಹೆಲಿಕ್ಯಾಪ್ಟರ್ ಅಣಕು ಪ್ರದರ್ಶನ ನಡೆಸಿ ರಾಷ್ಟ್ರಪತಿಗಳು ಬಂದಾಗ ಎಲ್ಲಿ ಯಾವ ರೀತಿ ಲ್ಯಾಂಡಿಂಗ್ ಮಾಡುವುದರ ಕುರಿತು ಪ್ರಾಯೋಗಿಕವಾಗಿ ಪ್ರದರ್ಶನ ನಡೆಸಿದರು. ನಂತರ ಜಯಂತಿ ಮಹೋತ್ಸವದ ವೇದಿಕೆ, ವಸ್ತುಪ್ರದರ್ಶನ ಸ್ಟಾಲ್, ದಾಸೋಹ ವ್ಯವಸ್ಥೆ, ಅಗಮನ, ನಿರ್ಗಮನ ಸ್ಥಳಗಳು, ವಾಹನ ಪಾರ್ಕಿಂಗ್, ದೇವಸ್ಥಾನ ನಿರ್ಮಾಣ ಸೇರಿದಂತೆ ಸುತ್ತಮುತ್ತಲ ಸ್ವಚ್ಚತೆ, ಕುಡಿಯುವ ನೀರು ಸೌಲಭ್ಯಗಳ ಕುರಿತು ಅಂತಿಮ ಹಂತದ ಪರಿಶೀಲನೆ ನಡೆಸಿ ಬಂದೋಬಸ್ತ್ ಕುರಿತು ಚರ್ಚೆ ನಡೆಸಿದರು

<><><>

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯ ೫ ನಗರ ಪಾಲಿಕೆಗಳಿಗೆ ೬೫೦ಕ್ಕೂ ಹೆಚ್ಚು ನಾಮ ನಿರ್ದೇಶಿತ ಸದಸ್ಯರ ನೇಮಕದ ಮೂಲಕ ಚುನಾವಣೆ ಮುಂದೂಡುವ ಆಪಾದನೆಗಳು ಆಧಾರ ರಹಿತವಾಗಿವೆ ಎಂದು ನಗರಾಭಿವೃದ್ಧಿ ಇಲಾಖೆಯು ಸ್ಪಷ್ಟಪಡಿಸಿದೆ. ಈ ಆಪಾದನೆಯು ವಿಧಾನಸಭೆಯಲ್ಲಿ ಮಂಡಿಸಲಾದ ಗ್ರೇಟರ್ ಬೆಂಗಳೂರು ಪ್ರಾಧಿಕಾರ-ಎರಡನೇ ತಿದ್ದುಪಡಿ ವಿಧೇಯಕ, ೨೦೨೫ರ ಉದ್ದೇಶವನ್ನು ತಪ್ಪಾಗಿ

ಅರ್ಥೈಸಿಕೊಂಡಿರುವುದಾಗಿದೆ ಎಂದು ಇಲಾಖೆ ತಿಳಿಸಿದೆ. ತಿದ್ದುಪಡಿಯು, ಪ್ರಾಧಿಕಾರಕ್ಕೆ ಹೊಸದಾಗಿ ಸೇರ್ಪಡೆಗೊಂಡ ಮತ್ತು ಚುನಾಯಿತ ಪ್ರತಿನಿಧಿಗಳಿಲ್ಲದ ಪ್ರದೇಶಗಳ ಆಡಳಿತ ನಿರ್ವಹಣೆಗಾಗಿ ಮಾತ್ರ ತಾತ್ಕಾಲಿಕ ಪ್ರಾತಿನಿಧ್ಯ ನೀಡುತ್ತದೆ. ಈ ಹೆಚ್ಚುವರಿ ನಾಮ ನಿರ್ದೇಶಿತ ಸದಸ್ಯರು ಆರು ತಿಂಗಳುಗಳಿಗಿಂತ ಹೆಚ್ಚು ಅವಧಿಗೆ ಮುಂದುವರೆಯಲು ಅವಕಾಶವಿಲ್ಲ. ಹೊಸ ಪ್ರದೇಶದ ಸೇರ್ಪಡೆಯಾದ ದಿನಾಂಕದಿಂದ ೬ ತಿಂಗಳೊಳಗೆ ಚುನಾವಣೆಯನ್ನು ಕಡ್ಡಾಯವಾಗಿ ನಡೆಸಬೇಕು ಎಂದು ವಿಧೇಯಕದಲ್ಲಿ ಸ್ಪಷ್ಟಪಡಿಸಲಾಗಿದೆ ಎಂದು ಇಲಾಖೆಯ ಪ್ರಕಟಣೆ ತಿಳಿಸಿದೆ. ನಾಮ ನಿರ್ದೇಶಿತ ಸದಸ್ಯರು ನಗರ ಪಾಲಿಕೆಯಲ್ಲಿ ಮತದಾನ ಮಾಡುವ ಅಧಿಕಾರ ಹೊಂದಿರುವುದಿಲ್ಲ. ಸರ್ಕಾರವು ಈಗಾಗಲೇ ೫ ನಗರ ಪಾಲಿಕೆಗಳ ೩೬೯ ವಾರ್ಡ್‌ಗಳ ಪುನರ್ ವಿಂಗಡಣೆ ಪೂರ್ಣಗೊಳಿಸಿದೆ. ಚುನಾವಣೆ ನಿಯಮಗಳು ಮತ್ತು ಮತದಾರರ ನೋಂದಣಿ ನಿಯಮಗಳನ್ನು ಅಂತಿಮಗೊಳಿಸಿ ರಾಜ್ಯ ಚುನಾವಣಾ ಆಯೋಗಕ್ಕೆ ನೀಡಲಾಗಿದೆ. ಈ ವಾರ್ಡ್‌ಗಳಿಗೆ ಚುನಾವಣೆ ನಡೆಸಿ ಚುನಾಯಿತ ಪ್ರತಿನಿಧಿಗಳನ್ನು ಆಯ್ಕೆ ಮಾಡಲು ಸರ್ಕಾರವು ಸಂಪೂರ್ಣವಾಗಿ ಬದ್ಧವಾಗಿದೆ. ತಪ್ಪುದಾರಿಗೆಳೆಯುವ ಮಾಹಿತಿಯನ್ನು ನಂಬದಂತೆ ನಗರಾಭಿವೃದ್ಧಿ ಇಲಾಖೆ ಸಾರ್ವಜನಿಕರನ್ನು ಕೋರಿದೆ.

<><><><>

ಎತ್ತಿನಹೊಳೆ ನೀರು ಯೋಜನೆಯನ್ನು ಅತಿ ಶೀಘ್ರದಲ್ಲಿ ಅನುಷ್ಠಾನಗೊಳಿಸುವುದರ ಜೊತೆಗೆ, ಕೋಲಾರ-ಚಿಕ್ಕಬಳ್ಳಾಪುರ-ಬೆಂಗಳೂರು ಗ್ರಾಮಾಂತರ ಜಿಲ್ಲೆಗಳ ಆಯ್ದ ಕೆರೆಗಳಿಗೆ ಬೆಂಗಳೂರಿನಿಂದ ಹರಿಸುತ್ತಿರುವ ಅರೆ-ಸಂಸ್ಕರಿತ ತ್ಯಾಜ್ಯ ನೀರನ್ನು ೩ನೇ ಹಂತದ ಶುದ್ಧೀಕರಣಕ್ಕೆ ಒಳಪಡಿಸಿದ ನಂತರ ಬಿಡುಗಡೆ ಮಾಡಬೇಕು ಎಂಬ ಆಗ್ರಹದೊಂದಿಗೆ ಕರ್ನಾಟಕ ರಕ್ಷಣಾ ವೇದಿಕೆ ಪ್ರತಿಭಟನೆಗೆ ಮುಂದಾಗಿದೆ. ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಪ್ರವೀಣ್ ಕುಮಾರ್ ಶೆಟ್ಟಿ ನೇತೃತ್ವದಲ್ಲಿ ನಾಳೆ ಬೆಳಗ್ಗೆ ೧೦ ಗಂಟೆಗೆ ಮಾಲೂರು ಬಾಲಾಜಿ ಚಿತ್ರಮಂದಿರದ ವೃತ್ತದಲ್ಲಿ ಮಾಲೂರು ತಾಲೂಕು ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ಬೃಹತ್ ಮಟ್ಟದ ಪ್ರತಿಭಟನೆ ನಡೆಸಲಿದ್ದಾರೆ ಎಂದು ಅಧ್ಯಕ್ಷ ಚಂಬೆ ರಾಜೇಶ್ ತಿಳಿಸಿದ್ದಾರೆ.

<><><><>

ಅಡಿಕೆ ಬೆಳೆಯ ಮಧ್ಯೆ ಅಂತರ್ ಬೆಳೆಯಾಗಿ ಕಾಫಿ ಮೊದಲಾದ ವಾಣಿಜ್ಯ ಬೆಳೆ ಬೆಳೆಯುವುದರಿಂದ ಹೆಚ್ಚಿನ ಲಾಭ ಗಳಿಸಬಹುದು ಎಂದು ಶಿವಮೊಗ್ಗದ ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿವಿ ಸಂಶೋಧನಾ ನಿರ್ದೇಶಕ ಬಿ.ಎಂ. ದುಷ್ಯಂತ ಕುಮಾರ್ ಹೇಳಿದರು. ದಾವಣಗೆರೆ ತಾಲ್ಲೂಕಿನ ಕತ್ತಲಗೆರೆ ಕೃಷಿ ಮತ್ತು ತೋಟಗಾರಿಕಾ ಸಂಶೋಧನಾ ಕೇಂದ್ರದ ವತಿಯಿಂದ ರೈತರಿಗೆ ಹಮ್ಮಿಕೊಂಡಿದ್ದ ಕಾಫಿ, ಕಾಳು ಮೆಣಸು ವೈಜ್ಞಾನಿಕ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

<><><><>

ಛತ್ತೀಸ್‌ಗಢದ ಭಿಲೈನಲ್ಲಿ ನಡೆಯುತ್ತಿರುವ ಕರ್ನಾಟಕ ಮತ್ತು ಉತ್ತರಾಖಂಡ ತಂಡಗಳ ನಡುವಿನ ವಿಜಯ್ ಮರ್ಚಂಟ್ ಟ್ರೋಫಿ ಎಲೈಟ್ - ಪುರುಷರ ೧೬ ವರ್ಷದೊಳಗಿನವರ ಟೆಸ್ಟ್ ಕ್ರಿಕೆಟ್ ಪಂದ್ಯ ಡ್ರಾ ದಲ್ಲಿ ಕೊನೆಗೊಂಡಿದೆ. ಇಂದು ಕರ್ನಾಟಕ ನೀಡಿದ್ದ ೩೩೮ ರನ್‌ಗಳ ಗುರಿಗಳನ್ನು ಬೆನ್ನಟ್ಟಿದ್ದ ಉತ್ತರಾಖಂಡಾ ದಿನದ ಅಂತ್ಯಕ್ಕೆ ೬ ವಿಕೆಟ್ ನಷ್ಟಕ್ಕೆ ೨೪೯ ರನ್ ಗಳಿಸಿದ್ದಾಗ, ಡ್ರಾ ಘೋಷಿಸಲಾಯಿತು.

<><><><>

ರಾಜ್ಯದಲ್ಲಿ ಒಣ ಹವೆ ಮುಂದುವರಿದಿದೆ, ಆದರೂ ಉತ್ತರ ಮತ್ತು ದಕ್ಷಿಣ ಒಳನಾಡಿನ ಕೆಲ ಭಾಗಗಳಲ್ಲಿ ತೀವ್ರ ಶೀತ ಅಲೆಯ ಪರಿಸ್ಥಿತಿ ಉಂಟಾಗಿದ್ದು, ಕನಿಷ್ಠ ತಾಪಮಾನವು ದಾಖಲೆ ಮಟ್ಟಕ್ಕೆ ಇಳಿದಿದೆ. ರಾಜ್ಯದ ಸಮತಟ್ಟಾದ ಪ್ರದೇಶಗಳಲ್ಲಿಯೇ ಅತಿ ಕನಿಷ್ಠ ತಾಪಮಾನ ದಾಖಲಾಗಿದ್ದು, ಬೀದರ್‌ನಲ್ಲಿ ೭.೪ ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>